

ಅರುಣ ಪಿ. ಭಟ್ಟ

## ವಾರಭವಿಷ್ಯ: 18.3.2021ರಿಂದ 24.3.2021ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ವ್ಯವಹಾರದಲ್ಲಿ ನಷ್ಟವಾಗುವ ಸಾಧ್ಯತೆ ಇದೆ. ಸಹೋದರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿದೆ. ನಿಮಗೆ ವಿಶೇಷವೆನಿಸುವ ವಿಚಾರಗಳಿಗೆ ಆಮಂತ್ರಣಗಳು ಹೆಚ್ಚಾಗುವ ಸಾಧ್ಯತೆ ಇದೆ. ಬಾಂಧವ್ಯ ಉತ್ತಮವಾಗಿರುತ್ತದೆ. ಶುಭದಿನ 20. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶಗಳು ಕಂಡುಬರಲಿದೆ. ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನೂ ಮಾಡಿ ಮುಗಿಸಲಿದ್ದೀರಿ. ಅವಿವಾಹಿತರಿಗೆ ವಿವಾಹದ ಯೋಗ ಸಾಧ್ಯತೆ ಕಾಣಬಹುದಾಗಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶೈಕ್ಷಣಿಕ ಪ್ರಗತಿಗೆ ಹಲವು ಅಡ್ಡಿ ಆತಂಕ ಎದುರಾಗಲಿದೆ. ಶುಭದಿನ 19. ಹನುಮಾನ್ ಚಾಲಿಸ್ ಪಠಿಸಿರಿ.




ಆತ್ಮೀಯರ ಜತೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವವಾಗಲಿದೆ ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಒತ್ತಡಬರಿತ ವಿಚಾರಗಳಿಂದ ಖಿನ್ನತೆ ಆವರಿಸಲಿದೆ ಆದಷ್ಟು ದೈಹಿಕ ಮತ್ತು ಮಾನಸಿಕ ಚೈತನ್ಯಕ್ಕೆ ನೋಡಿಕೊಳ್ಳಿ. ಶುಭದಿನ 22. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಪ್ರೇಕ್ಷಣೀಯ ಸ್ಥಳಗಳು ಭೇಟಿ ಮಾಡುವ ಸಾಧ್ಯತೆ ಇದೆ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಶುಭದಿನ 20. ಶಿವಕವಚ ಪಠಣ ಮಾಡಿರಿ.




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ನಿಮ್ಮ ಆಲೋಚನೆಗಳನ್ನು ಕ್ಷುಲ್ಲಕ ವಿಚಾರಗಳಿಗೆ ಹರಿಸಬೇಡಿ. ಪತ್ನಿಯ ವಿಚಾರಗಳಿಗೆ ಸಹಮತನೀಡಿ. ಆರ್ಥಿಕ ವಿಷಯದಲ್ಲಿ ಸಂತೃಪ್ತಿಯ ಭಾವನೆ ಮೂಡಲಿದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಶುಭದಿನ 21. ಲಿಂಗಾಷ್ಟಕ ಪಠಿಸಿರಿ.




ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು. ಆರೋಗ್ಯದ ಹಿತದೃಷ್ಟಿಯನ್ನು ಮನಗಾಣಿರಿ. ಆದಾಯ ಹೆಚ್ಚಳವಾಗಿದ್ದರೂ ಸಹ ಖರ್ಚುಗಳು ವಿಪರೀತ ವಾಗಲಿದೆ. ಅನಪೇಕ್ಷಿತ ಖರ್ಚುಗಳಿಗೆ ಕಡಿವಾಣ ಹಾಕುವುದು ಒಳ್ಳೆಯದು. ಪತ್ನಿಯೊಡನೆ ಉತ್ತಮ ಬಾಂಧವ್ಯ ಇರಲಿದೆ. ಮುನಿಸಿಕೊಂಡು ಹೋಗಿರುವ ದಂಪತಿಗಳು ಹತ್ತಿರವಾಗುವ ಸಮಯವಿದು. ಶುಭದಿನ 23. ಚಂಡಿ ಪಾರಾಯಣ ಮಾಡಿರಿ.




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಆರ್ಥಿಕವಾಗಿ ಬಳಲುವಿಕೆ ಈ ವಾರ ಕಂಡುಬರಲಿದೆ. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷತನ ಹೆಚ್ಚಾಗಬಹುದು. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡು ಬರಲಿದೆ. ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.




ಚರ್ಚಾಕೂಟಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ನಿರೀಕ್ಷೆಯಂತೆ ಆರ್ಥಿಕವಾಗಿ ಪ್ರಬಲರಾಗುವ ಸಾಧ್ಯತೆ ಇದೆ. ವಿದ್ಯಾರ್ಥಿಗಳಿಗೆ ನಿರೀಕ್ಷೆಗಳು ಮೂಡಲಿದೆ. ಸ್ವಾವಲಂಬನೆಯ ಚಿಂತನೆ ಮೂರ್ತಸ್ವರೂಪ ಪಡೆಯಲಿದೆ. ವಾರದ ಮಧ್ಯದಲ್ಲಿ ದಿಢೀರ್ ಖರ್ಚಿನ ಪ್ರಮಾಣ ಹೆಚ್ಚಾಗಬಹುದು. ಕೆಲಸಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಒತ್ತಡ ಹೆಚ್ಚಾಗುತ್ತದೆ. ಶುಭದಿನ 20. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ವ್ಯವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ವಾರದ ಮಧ್ಯ ಭಾಗದಲ್ಲಿ ಅನುಕೂಲಕರವಾದ ಬೆಳವಣಿಗೆಗಳು ಆಗಲಿವೆ. ಶುಭದಿನ 21. ಕಾಲಭೈರವನ ಸೇವೆ ಮಾಡಿರಿ.




ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಸಾಹಿತ್ಯ ಚಟುವಟಿಕೆಗಳಲ್ಲಿ ಉತ್ತಮ ಮನ್ನಣೆ ಗಳಿಸಲಿದ್ದೀರಿ. ಕೆಲವು ಅದೃಷ್ಟದ ಭಾಗ್ಯಗಳು ಒದಗಿಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಉದ್ಯೋಗಸ್ಥರಿಗೆ ವಾರದ ಮಧ್ಯದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ಶುಭದಿನ 21. ವಿಷ್ಣು ಸಹಸ್ರನಾಮ ಮಾಡಿ.




ಅಪರಿಚಿತ ವ್ಯಕ್ತಿಗಳಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಕೆದ್ರೋಹದಂತಹ ಚಟುವಟಿಕೆಗಳು ನಡೆಯಲಿದ್ದು ಎಚ್ಚರದಿಂದಿರಿ. ಪತ್ನಿಯೊಡನೆ ಅತಿ ಹೆಚ್ಚು ಕೋಪ ಕಲಹಗಳಲ್ಲಿ ಪಾಲ್ಗೊಳ್ಳ ಬೇಡಿ. ನಿಮ್ಮೆಲ್ಲ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕವಾಗಿ ಬೇಕಾಗಿದೆ. ಹಣಕಾಸಿನ ವಿಷಯದಲ್ಲಿ ಉತ್ತಮ ರೀತಿಯ ವ್ಯವಹಾರ ಕಾಣಬಹುದು. ಶುಭದಿನ 23. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ಕೆಲಸಕಾರ್ಯಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಕಲಿಕೆಯ ವಿಷಯಾಸಕ್ತಿ ತುಂಬಾ ಉತ್ತಮ ಮಟ್ಟದಲ್ಲಿ ಇರಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ಶುಭದಿನ 22. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.